ಕರ್ನಾಟಕ ಸರ್ಕಾರ

**ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು**

ಸಂಖ್ಯೆ:ಎ8/ಎಸ್‌ಎಸ್‌ಎಲ್‌ಸಿ/ಪ್ರ.ಪ.ಸ್ವ/12/2022-23 ದಿನಾಂಕ:11.07.2022

**:: ಸುತ್ತೋಲೆ ::**

ವಿಷಯ: 2022-23ನೇ ಸಾಲಿನ ಶೈಕ್ಷಣಿಕ ವರ್ಷದಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷಾ ಪ್ರಶ್ನೆಪತ್ರಿಕೆ ಸ್ವರೂಪ ಮತ್ತು ಕಠಿಣತೆ ಮಟ್ಟದ ಕುರಿತು.

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ: ಇಪಿ 197 ಎಸ್‌ಎಲ್‌ಬಿ 2021 ದಿನಾಂಕ:06.12.2021.
2. ಸರ್ಕಾರದ ಆದೇಶ ಸಂಖ್ಯೆ: ಇಪಿ 110 ಎಸ್‌ಎಲ್‌ಬಿ 2021 ದಿನಾಂಕ:18.06.2021.
3. ಮಂಡಳಿಯ ಜ್ಞಾಪನ ಸಂಖ್ಯೆ:ಸಿ1/SSLC/MPIC/ಸಭೆ/08/2019-20 ದಿನಾಂಕ:21.06.2019.
4. ಈ ಕಛೇರಿ ಸುತ್ತೋಲೆ ಎ8/ಎಸ್‌ಎಸ್‌ಎಲ್‌ಸಿ/ಹಾ.ಕ-23/10/2022-23 ದಿನಾಂಕ:30.06.2022.
5. ಹಿರಿಯ ಸಹಾಯಕ ನಿರ್ದೇಶಕರು, ಸಿ ಶಾಖೆ ರವರ ಟಿಪ್ಪಣಿ ಸಂಖ್ಯೆ:ಸಿ1/ಪ್ರ.ಪ.ಸ್ವರೂಪ/2022-23 ದಿನಾಂಕ:07.07.2022.

*********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2015-16ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಪ್ರಶ್ನೆಪತ್ರಿಕೆ ವಿನ್ಯಾಸ ಹಾಗೂ ನೀಲನಕಾಶೆಯನ್ನು ಪರಿಷ್ಕರಿಸಿ ಕಠಿಣತೆಯ ಮಟ್ಟವನ್ನು ಈ ಕೆಳಗಿನಂತೆ ನಿಗದಿಪಡಿಸಲಾಗಿರುತ್ತದೆ. ಉಲ್ಲೇಖ-3ರ ಜ್ಞಾಪನದಲ್ಲಿ 2019-20ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಪ್ರಶ್ನೆಪತ್ರಿಕೆ ಸ್ವರೂಪದಲ್ಲಿ ಅಲ್ಪ ಬದಲಾವಣೆ ಮಾಡಿ, ಕಠಿಣತೆಯ ಮಟ್ಟದಲ್ಲಿ ಯಾವುದೇ ಬದಲಾವಣೆ ಮಾಡಿರುವುದಿಲ್ಲ.

| ಸುಲಭ ಪ್ರಶ್ನೆಗಳು | ಸಾಧಾರಣ ಪ್ರಶ್ನೆಗಳು | ಕಠಿಣ ಪ್ರಶ್ನೆಗಳು | ಒಟ್ಟು |
|---|---|---|---|
| 30% | 50% | 20% | 100% |

2020-21ರ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಕೋವಿಡ್-19ರ 2ನೇ ಅಲೆಯು ರಾಜ್ಯವ್ಯಾಪಿ ವ್ಯಾಪಿಸಿದ್ದಂತಹ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳ ಸುರಕ್ಷತಾ ಮತ್ತು ಶೈಕ್ಷಣಿಕ ಹಿತದೃಷ್ಟಿಯಿಂದ ಪರೀಕ್ಷೆಯನ್ನು ಸರಳೀಕರಿಸಿ ಎರಡು ದಿನಗಳಲ್ಲಿ (ಒಂದು ದಿನ ಕೋರ್ ವಿಷಯಗಳು ಮತ್ತು ಮತ್ತೊಂದು ದಿನ ಭಾಷಾ ವಿಷಯಗಳು) MCQ (Multiple Choice Question) ಬಹು ಆಯ್ಕೆ ಪ್ರಶ್ನೆ ಆಧಾರಿತ ಪ್ರಶ್ನೆಪತ್ರಿಕೆಯನ್ನು ನೀಡಿ ಉತ್ತರಿಸಲು ಉತ್ತರ ಪತ್ರಿಕೆಯನ್ನು OMR (Optical Mark Reader) ಗೆ ಪೂರಕವಾದ ವಿನ್ಯಾಸದಲ್ಲಿ ನೀಡಲಾಗಿರುತ್ತದೆ.

2021–22ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ರಾಜ್ಯದಲ್ಲಿ ಶಾಲೆಗಳು ಭೌತಿಕವಾಗಿ 2 ರಿಂದ 3 ತಿಂಗಳು ವಿಳಂಬವಾಗಿ ಪ್ರಾರಂಭವಾಗಿರುವುದರಿಂದ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಶೇಕಡಾ 20 ರಷ್ಟು ಪಠ್ಯವಸ್ತುವನ್ನು ಕಡಿತಗೊಳಿಸಲಾಗಿದ್ದ ಹಿನ್ನೆಲೆಯಲ್ಲಿ 2019–20ನೇ ಸಾಲಿನಲ್ಲಿದ್ದಂತೆಯೇ ಪ್ರಶ್ನೆಪತ್ರಿಕೆಯ ಮಾದರಿಯಲ್ಲಿ ಬದಲಾವಣೆಯನ್ನು ಮಾಡದೆ, ಪ್ರಶ್ನೆಪತ್ರಿಕೆಯ ಕಠಿಣತೆಯ ಮಟ್ಟವನ್ನು ಈ ಕೆಳಕಂಡಂತೆ ಕಡಿಮೆ ಮಾಡಿ ಆದೇಶಿಸಲಾಗಿರುತ್ತದೆ.

| ಸುಲಭ ಪ್ರಶ್ನೆಗಳು | ಸಾಧಾರಣ ಪ್ರಶ್ನೆಗಳು | ಕಠಿಣ ಪ್ರಶ್ನೆಗಳು | ಒಟ್ಟು |
|---|---|---|---|
| 40% | 50% | 10% | 100% |

ಮುಂದುವರೆದು, 2022–23ನೇ ಶೈಕ್ಷಣಿಕ ವರ್ಷಕ್ಕೆ ದಿನಾಂಕ:16.05.2022ರಿಂದಲೇ ಪೂರ್ಣ ಪ್ರಮಾಣದಲ್ಲಿ ಶಾಲೆಗಳು ಭೌತಿಕವಾಗಿ ಪ್ರಾರಂಭಿಸಲಾಗಿರುವ ಹಿನ್ನೆಲೆಯಲ್ಲಿ ಮಂಡಳಿಯ ಕಾಯ್ದೆ–1966 ನಿಯಮ–37 ರನ್ವಯ, 2022–23ನೇ ಸಾಲಿನಿಂದ ಶಾಲಾ ವಿದ್ಯಾರ್ಥಿಗಳಾಗಿ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಕುಳಿತುಕೊಳ್ಳಲು ಶಾಲೆಯು ಕಾರ್ಯ ನಿರ್ವಹಿಸಲು ನಿಗಧಿಪಡಿಸಿರುವ ದಿನಗಳಿಗೆ ಅನುಸಾರ ಕನಿಷ್ಠ ಶೇ.75ರಷ್ಟು ಹಾಜರಾತಿ ಕಡ್ಡಾಯಗೊಳಿಸಿರುವುದನ್ನು ಯಥಾ ರೀತಿ ಮುಂದುವರೆಸಿ ಉಲ್ಲೇಖ–4ರ ದಿನಾಂಕ:30.06.2022ರಂದು ಸುತ್ತೋಲೆ ಹೊರಡಿಸಲಾಗಿರುತ್ತದೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ 2019–20ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಪ್ರಶ್ನೆಪತ್ರಿಕೆ ಸ್ವರೂಪ ಮತ್ತು ಕಠಿಣತೆಯ ಮಟ್ಟವನ್ನು ಯಾವುದೇ ಬದಲಾವಣೆ ಮಾಡದೇ ಪ್ರಸಕ್ತ 2022–23ನೇ ಸಾಲಿನಿಂದ ಅದೇ ವರ್ಗೀಕರಣದಂತೆ ಯಥಾ ರೀತಿ ಮುಂದುವರೆಸಿದೆ.

15/07/2022

ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ
ಮತ್ತು ಅಧ್ಯಕ್ಷರು ಕ.ಪ್ರೌ.ಶಿ.ಪ.ಮಂಡಳಿ.

ಗೆ,

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಸರ್ಕಾರದಿಂದ ಮಾನ್ಯತೆ ಪಡೆದ ಖಾಸಗಿ ಪ್ರೌಢ ಶಾಲೆಗಳ ಮುಖ್ಯ ಶಿಕ್ಷಕರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ (ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ).
4. ಶಾಖಾಧಿಕಾರಿಗಳು, ಸಿ , ಬಿ ಮತ್ತು ಲೆಕ್ಕಾಧಿಕಾರಿಗಳು, ಲೆಕ್ಕಪತ್ರ ಹಾಗೂ ಎಲ್ಲಾ ಪರಿಶೀಲನಾ ಶಾಖೆರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
5. ಶಾಖಾಧಿಕಾರಿಗಳು, ಗಣಕಶಾಖೆರವರಿಗೆ ಮುಂದಿನ ಸೂಕ್ತಕ್ರಮಕ್ಕಾಗಿ ಹಾಗೂ ಸದರಿ ಸುತ್ತೋಲೆಯನ್ನು ಮಂಡಳಿ ಜಾಲತಾಣ ಮತ್ತು ಶಾಲಾಲಾಗಿನ್‌ನಲ್ಲಿ ಅಪ್‌ಲೋಡ್ ಮಾಡುವುದು.
6. ಕಛೇರಿ ಪ್ರತಿ.